ಸಂಖ್ಯೆ: ಇಡಿ/ಕೆಇಎ/07/ನೇ.ವಿ./2026(ಆರ್‌ಪಿಸಿ) ದಿನಾಂಕ: 29.10.2026

ಪ್ರಕಟಣೆ

ಪ್ರಾಧಿಕಾರ ಅಧಿಸೂಚನೆ ಸಂಖ್ಯೆ: ಇಡಿ/ಕೆಇಎ/07/ನೇವಿ/2026(ಆರ್‌ಪಿಸಿ), ದಿನಾಂಕ: 19.05.2026 ರಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಉಳಿಕೆ ಮೂಲ ವೃಂದದಲ್ಲಿ ಖಾಲಿಯಿರುವ ಗ್ರೂಪ್-ಸಿ ವೃಂದದ 02 ಪ್ರಥಮ ದರ್ಜೆ ಸಹಾಯಕ ಮತ್ತು 04 ದ್ವಿತೀಯ ದರ್ಜೆ ಸಹಾಯಕ ನೇರ ನೇಮಕಾತಿ ಹುದ್ದೆಗಳನ್ನು ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು. ಸದರಿ ಅಧಿಸೂಚನೆಯಲ್ಲಿ ಪ್ರಥಮ ದರ್ಜೆ ಸಹಾಯಕ ಹುದ್ದೆಯ ನೇಮಕಾತಿಯ ಅಧಿಸೂಚನೆಯನ್ನು ಭಾಗಶಃ ಹಿಂಪಡೆದು, ಪ್ರಾಧಿಕಾರದಿಂದ ದಿನಾಂಕ: 29.10.2026 ರಂದು ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ: ಇಡಿ/ಕೆಇಎ/14/ನೇವಿ/2026(ಆರ್‌ಪಿಸಿ) ರಲ್ಲಿ ಸದರಿ 02 ಪ್ರಥಮ ದರ್ಜೆ ಸಹಾಯಕ ಹುದ್ದೆಗಳನ್ನು ಸೇರ್ಪಡೆಗೊಳಿಸಿ, ಭರ್ತಿ ಮಾಡಲು ಅಧಿಸೂಚಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಈಗಾಗಲೇ ಪ್ರಾಧಿಕಾರ ಅಧಿಸೂಚನೆ ಸಂಖ್ಯೆ: ಇಡಿ/ಕೆಇಎ/07/ನೇವಿ/2026(ಆರ್‌ಪಿಸಿ), ದಿನಾಂಕ: 19.05.2026 ರಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಉಳಿಕೆ ಮೂಲ ವೃಂದದಲ್ಲಿನ ಪ್ರಥಮ ದರ್ಜೆ ಸಹಾಯಕ ಹುದ್ದೆಗೆ ಅರ್ಜಿ ಸಲ್ಲಿಸಿ, ಶುಲ್ಕ ಪಾವತಿಸಿದ್ದ ಅಭ್ಯರ್ಥಿಗಳಿಗೆ ದಿನಾಂಕ: 29.10.2026 ರ ಅಧಿಸೂಚನೆ ಸಂಖ್ಯೆ: ಇಡಿ/ಕೆಇಎ/14/ನೇವಿ/2026(ಆರ್‌ಪಿಸಿ) ರಲ್ಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. ಅರ್ಜಿ ಸಲ್ಲಿಸದವರಿಗೆ ಶುಲ್ಕ ಹಿಂದಿರುಗಿಸಲಾಗುವುದು.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in